# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ.05/2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : 7-11-2020

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ:- ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ. ಬಿ12(5)ಪಿ.ಆರ್/35/2020-21, ದಿನಾಂಕ. 21.09.2020ರ ಆದೇಶದಂತೆ ದಿ. 07.11.2020ರಂದು ವಾರ್ಡ್ ಸಂಖ್ಯೆ. 121, ಬಿನ್ನಿಪೇಟೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಸ್ಥಳ: ಬಿಬಿಎಂಪಿ ಕಛೇರಿ, ಮಾಗಡಿ ರಸ್ತೆ, 4ನೇ ಕ್ರಾಸ್,
ಸಮಯ: ಬೆಳಿಗ್ಗೆ 11.00 ಗಂಟೆಗೆ
ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ

| | | |
|---|---|---|
| 1 | ಶ್ರೀ ರಾಜಣ್ಣ, | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ |
| 2 | ಶ್ರೀ ಕೆ.ಬಿ ತಾರಾನಾಥ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, |
| 3 | ಶ್ರೀ ವಿ.ಆರ್.ಕೃಷ್ಣಪ್ಪ | ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿಗಳು |
| 4 | ಶ್ರೀಮತಿ ಡಾ॥ ನಂದಿನಿ | ಆರೋಗ್ಯ ಇಲಾಖೆ |
| 5 | ಶ್ರೀ ಶಶಿಕುಮಾರ್ | ಆರೋಗ್ಯ ಪರಿವೀಕ್ಷಕರು |
| 6 | ಶ್ರೀ ಭರತ್ ಎಸ್ | ಕೆಂಪೇಗೌಡ ಸಾಂಸ್ಕೃತಿಕ ಸಂಘದ ಸದಸ್ಯರು |
| 7 | ಶ್ರೀ ರಘು | ಸದಸ್ಯರು |
| 8 | ಶ್ರೀ ಮಹೇಶ್ ಬಿ | ಸದಸ್ಯರು |
| 9 | ಶ್ರೀಮತಿ ಡಾ॥ ಮಣಿ | ಹೆಲ್ಪಿಂಗ್ ಹ್ಯಾಂಡ್ಸ್ ಅಸೋಸಿಯೇಟ್ಸ್ ಸದಸ್ಯರು |
| 10 | ಶ್ರೀಮತಿ ವಿ. ಸುಶೀಲ | ಸದಸ್ಯರು |
| 11 | ಶ್ರೀ ಎಸ್. ಗುಣ | ಸದಸ್ಯರು |
| 12 | ಶ್ರೀ ಜಿ. ಪ್ರವೀಣ್ ಕುಮಾರ್ ನಾಯ್ಡು | ಸದಸ್ಯರು |
| 13 | ಶ್ರೀ ಮಹೇಶ್ ಬಿ.ಎನ್. | ಸಂಘದ ಸದಸ್ಯರು |
| 14 | ಸಂಘ ಸಂಸ್ಥೆಗಳ ಸದಸ್ಯರು | |

ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳು ಮತ್ತು ಸಿಬ್ಬಂದಿಗಳೊಂದಿಗೆ ಈ ಕೆಳಕಂಡ ಅಂಶಗಳನ್ನು ಚರ್ಚಿಸಲಾಯಿತು.

Scanned with CamScanner

1. ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, Police Out Post ಗೆ ಸಿಬ್ಬಂದಿ ನಿಯೋಜನೆ ಮಾಡಿರುವುದಿಲ್ಲ ಎಂದು ಸಾರ್ವಜನಿಕರಿಂದ ದೂರುಗಳು ಬಂದಿದ್ದು ಇದರ ಬಗ್ಗೆ ಕ್ರಮ ಕೈಗೊಳ್ಳಲು ಪೋಲೀಸ್ ಠಾಣೆಗೆ ಪತ್ರ ಬರೆಯಲಾಗಿರುತ್ತದೆ.
2. ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ಗೋಪಾಲಪುರ ರಾಜಕಾಲುವೆ ಹತ್ತಿರ ನಿರ್ಮಿಸುತ್ತಿರುವ ತಾತ್ಕಾಲಿಕ ಶೆಡ್‌ನ ಬಗ್ಗೆ ಸಾರ್ವಜನಿಕರಿಂದ ದೂರು ಬಂದಿದ್ದು, ಇದರ ಬಗ್ಗೆ ಸ್ಥಳ ಪರಿಶೀಲಿಸಲು ಸ್ಥಳೀಯ ಅಧಿಕಾರಿಗಳಿಗೆ ಸೂಚಿಸಲಾಗಿತ್ತು. ಅದರಂತೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರೊಂದಿಗೆ ದಿನಾಂಕ. 13.10.2020ರಂದು ಸ್ಥಳ ಪರಿಶೀಲಿಸಲಾಗಿ ಸಂಬಂಧಿಸಿದ ಮಾಲೀಕರು ಅವರ ಸ್ವತ್ತಿಗೆ ಸಂಬಂಧಿಸಿದ ದಾಖಲೆಗಳನ್ನು ನೀಡಿರುತ್ತಾರೆ. ಸದರಿ ದಾಖಲೆಗಳ ಬಗ್ಗೆ ಮತ್ತೊಮ್ಮೆ ಪರಿಶೀಲಿಸಿ ದೃಢೀಕರಣ ನೀಡಲು ಸಹ ಕಂದಾಯ ಅಧಿಕಾರಿ ರವರಿಗೆ ಪತ್ರ ಬರೆಯಲು ಸಭೆಯಲ್ಲಿ ತೀರ್ಮಾನಿಸಲಾಯಿತು.
3. ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ಆರೋಗ್ಯ ಇಲಾಖೆಗೆ ಸಂಬಂಧಿಸಿದಂತೆ ಶ್ರೀ ಪಾಂಡುರಂಗ ಎಂಬುವವರು Factory ಯಿಂದ ಹೊಗೆ ಮತ್ತು ಇತರ ತ್ಯಾಜ್ಯದಿಂದ ತೊಂದರೆಯಾಗುತ್ತಿದ್ದು, ಇದರ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ಶ್ರೀ ರವಿಕುಮಾರ್ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಗಿತ್ತು. ಸದರಿ ಫ್ಯಾಕ್ಟರಿ ರವರಿಗೆ ಸಂಬಂಧಿಸಿದ ಟ್ರೇಡ್ ಲೈಸೆನ್ಸ್ ಚಾಲ್ತಿಯಲ್ಲಿರುವುದರಿಂದ ಕ್ರಮ ಕೈಗೊಳ್ಳಲು ನಮ್ಮ ವ್ಯಾಪ್ತಿಗೆ ಬರುವುದಿಲ್ಲ. ಆದುದರಿಂದ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ರವರಿಗೆ ಪತ್ರ ಬರೆಯಲು ಸಭೆಯಲ್ಲಿ ತೀರ್ಮಾನಿಸಲಾಯಿತು.
4. ವಾರ್ಡಿನಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಆರೋಗ್ಯ ಇಲಾಖೆಯವರಿಗೆ ಸಮರ್ಪಕವಾಗಿ ಔಷಧಿ ಸಿಂಪಡಣೆ ಕಾರ್ಯಗಳನ್ನು ಕೈಗೊಳ್ಳಲು ಸೂಚಿಸಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಜನಸಂದಣಿ ಪ್ರದೇಶಗಳಲ್ಲಿ ಸಾರ್ವಜನಿಕ ಸಾಮಾಜಿಕ ಅಂತರ (SOCIAL DISTANCE) ಕಾಪಾಡಿಕೊಳ್ಳುವುದು ಹಾಗೂ ಮಾಸ್ಕ್ ಧರಿಸುವುದರ ಬಗ್ಗೆ ಅರಿವು ಮೂಡಿಸಲು ಹಾಗೂ ಕ್ರಮ ಕೈಗೊಳ್ಳಲು ಸೂಚಿಸಲಾಗಿರುತ್ತದೆ. ವಾರ್ಡ್‌ನಲ್ಲಿ ಪಾಸಿಟಿವ್ ಪ್ರಕರಣಗಳಿದ್ದು, ಅದರಲ್ಲಿ ಚಾಲ್ತಿಯಲ್ಲಿರುವ ಪ್ರಕರಣ ಆರೈಕೆಯಲ್ಲಿರುವವರು ಡಿಸ್ಚಾರ್ಜ್ ಆಗಿರುವ ಪ್ರಕರಣಗಳ ಬಗ್ಗೆ ತಿಳಿಸಿರುತ್ತಾರೆ.
5. ಬೆಸ್ಕಾಂ ಇಲಾಖೆ ವತಿಯಿಂದ ಈಗಾಗಲೇ ಅಗೆದಿರುವ ರಸ್ತೆಗಳನ್ನು ಸರಿಪಡಿಸಿ ಅಗೆದಿರುವ ಹೆಚ್ಚುವರಿ ಮಣ್ಣನ್ನು ತೆರವುಗೊಳಿಸಲು ಸೂಚಿಸಲಾಗಿದೆ ಹಾಗೂ ಬೆಸ್ಕಾಂ ರವರು ಕಡಿದಿರುವ ಮರದ ಕೊಂಬೆಗಳನ್ನು ತಮ್ಮ ಇಲಾಖೆ ವತಿಯಿಂದ ತೆರವುಗೊಳಿಸಲು ತಿಳಿಸಲಾಗಿದೆ.
6. ಮಾಗಡಿ ರಸ್ತೆ 3ನೇ ಮತ್ತು 4ನೇ ಕ್ರಾಸ್ ಮತ್ತು ಅಡ್ಡ ರಸ್ತೆಗಳಲ್ಲಿ BWSSB ಛೇಂಬರ್ ದುರಸ್ತಿ ಬಗ್ಗೆ ಚರ್ಚಿಸಲಾಗಿ ಸದರಿ ಹಳೆಯ ಛೇಂಬರ್‌ಗಳನ್ನು ದುರಸ್ತಿಗೊಳಿಸಿಕೊಡಲು ಸಂಬಂಧಿಸಿದ BWSSB ಅಧಿಕಾರಿಗಳಿಗೆ ತಿಳಿಸಲಾಗಿತ್ತು. ಆದರೆ ಈ ದಿವಸ ಸಭೆಗೆ BWSSB ವತಿಯಿಂದ ಯಾರೂ ಸಹ ಹಾಜರಾಗಿರುವುದಿಲ್ಲ. ಇದಕ್ಕೆ ಸಭೆಯಲ್ಲಿ ತುಂಬಾ ವಿಷಾದ ವ್ಯಕ್ತಪಡಿಸಲಾಯಿತು ಹಾಗೂ ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಾಗಲು ತಿಳಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.
7. ಶ್ರೀ ಮಹೇಶ್ ಬಿ. ಸಮಿತಿ ಸಭೆ ಸದಸ್ಯರು ವೀನಸ್ ಶಾಲೆ ಹಾಗೂ ರೈಲ್ವೆ ಗೇಟ್ ಹತ್ತಿರ ಸಾರ್ವಜನಿಕರು ಕಸವನ್ನು ಹೆಚ್ಚಾಗಿ ಹಾಕುತ್ತಿದ್ದು ಇದರ ಬಗ್ಗೆ ಕ್ರಮ ಕೈಗೊಳ್ಳಲು ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ರವಿಕುಮಾರ್ ರವರಿಗೆ ಸೂಚಿಸಲಾಯಿತು.
8. ಮುಂದಿನ ಸಭೆಗೆ ಮಾಗಡಿ ರಸ್ತೆಯ ಟ್ರಾಫಿಕ್ ಪೋಲೀಸ್ ಸಿಬ್ಬಂದಿಗೆ ಸಭೆಗೆ ಹಾಜರಾಗಲು ನೋಟೀಸ್ ನೀಡಲು ತೀರ್ಮಾನಿಸಲಾಯಿತು.
9. ಮಾಗಡಿ ರಸ್ತೆಯ ಹೆರಿಗೆ ಆಸ್ಪತ್ರೆಗೆ ಎಂ.ಬಿ.ಬಿ.ಎಸ್. ವೈದ್ಯಾಧಿಕಾರಿಗಳು ಇಲ್ಲದೇ ಇರುವುದರಿಂದ ಹೊಸ ವೈದ್ಯರನ್ನು ನಿಯೋಜಿಸಲು ಡಾ|| ಮಣಿ ಮತ್ತು ಪ್ರವೀಣ್ ನಾಯ್ಡು ರವರು ಸಭೆಯಲ್ಲಿ ಒತ್ತಾಯಿಸಿದರು. ಇದರ ಬಗ್ಗೆ ಆರೋಗ್ಯ ವೈದ್ಯಾಧಿಕಾರಿಗಳಿಗೆ ಪತ್ರ ಬರೆಯಲು ತೀರ್ಮಾನಿಸಲಾಯಿತು.

Scanned with CamScanner

10. ಮಾಗಡಿ ರಸ್ತೆಯ ಹೆರಿಗೆ ಆಸ್ಪತ್ರೆಗೆ ಮುಂಭಾಗ ವಾಹನಗಳನ್ನು ದುರ್ಬ್ಯಗೊಳಿಸುತ್ತಿದ್ದು ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು ಇದರ ಬಗ್ಗೆ ಕ್ರಮ ಕೈಗೊಳ್ಳಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.
11. ಇ.ಟಿ.ಎ ಮಾಲ್ ಹತ್ತಿರ ಬನಶಂಕರಿ ಟ್ರಾವೆಲ್ಸ್‌ನ ವಾಹನಗಳನ್ನು ನಿಲ್ಲಿಸುತ್ತಿರುವ ಬಗ್ಗೆ ಶ್ರೀ ಮಹೇಶ್ ಬಿ ರವರು ಸಭೆಯಲ್ಲಿ ಚರ್ಚಿಸಿದ್ದು ಸಂಬಂಧಿಸಿದ ಟ್ರಾಫಿಕ್ ಪೋಲೀಸ್ ಸಿಬ್ಬಂದಿಗೆ ಪತ್ರ ಬರೆಯಲು ಚರ್ಚಿಸಲಾಯಿತು.
12. ಚುನಾವಣಾ ಗುರುತಿನ ಚೀಟಿ ತಿದ್ದುಪಡಿಯ ಬಗ್ಗೆ ಛಾಯಾಚಿತ್ರವನ್ನು ತೆಗೆದುಕೊಂಡು ಹೋಗಿದ್ದು ಇದುವರೆಗೆ ಗುರುತಿನ ಚೀಟಿ ನೀಡಿರುವುದಿಲ್ಲವೆಂದು ಸಭೆಯಲ್ಲಿ ಚರ್ಚಿಸಲಾಗಿ ಇದರ ಬಗ್ಗೆ ಕ್ರಮ ಕೈಗೊಳ್ಳಲು ಸಹ ಕಂದಾಯ ಅಧಿಕಾರಿ ರವರಿಗೆ ಪತ್ರ ಬರೆಯಲು ಚರ್ಚಿಸಲಾಯಿತು.
13. ಹಳೇ ಪೋಲೀಸ್ ಸ್ಟೇಷನ್ ಮುಂಭಾಗ ಬೆಸ್ಕಾಂನ ವಿದ್ಯುತ್ ಕಂಬವು ಮುರಿದು ಬೀಳುವ ಸ್ಥಿತಿಯಲ್ಲಿದ್ದು ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಬೆಸ್ಕಾಂಗೆ ಪತ್ರ ಬರೆಯಲು ತೀರ್ಮಾನಿಸಲಾಯಿತು.
14. ಮುಂದಿನ ವಾರ್ಡ್ ಸಭೆಗೆ ಆಶಾ ಕಾರ್ಯಕರ್ತೆಯರು, ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಬೆಸ್ಕಾಂ ಸಿಬ್ಬಂದಿಗೆ ಕಡ್ಡಾಯವಾಗಿ ಹಾಜರಾಗುವಂತೆ ಸೂಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.
15. ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ, ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ನಿರ್ಣಯ:-

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 121, ಬಿನ್ನಿಪೇಟೆ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ 121, ಬಿನ್ನಿಪೇಟೆ

ಪ್ರತಿಯನ್ನು:
1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು, (ಆರೋಗ್ಯ ಮತ್ತು ಘ.ತ್ಯಾ.ನಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಸಮಿತಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

Scanned with CamScanner